# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೦೮-೦೨-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

**ಪ್ರಕಟಣೆಯ ಕೃಪೆಗಾಗಿ..**

## ಡಾ. ಎಚ್.ವಿಶ್ವನಾಥ್ ಮತ್ತು ಇಂದಿರಾ ದತ್ತಿ ಪ್ರಶಸ್ತಿಗಾಗಿ ಪುಸ್ತಕ ಆಹ್ವಾನ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತು ನೀಡುವ ಡಾ. ಎಚ್.ವಿಶ್ವನಾಥ್ ಮತ್ತು ಇಂದಿರಾ ದತ್ತಿ ಪ್ರಶಸ್ತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಪುಸ್ತಕಗಳನ್ನು ಆಹ್ವಾನಿಸಲಾಗಿದೆ. ಈ ದತ್ತಿ ಪ್ರಶಸ್ತಿಯು ವಿಶೇಷ ದೃಷ್ಟಿಚೇತನ ಲೇಖಕರಿಗಾಗಿ ಮೀಸಲಿದ್ದು, **ಫೆಬ್ರವರಿ ೨೮ ರೊಳಗಾಗಿ** ತಾವು ರಚಿಸಿದ ಕನಿಷ್ಟ ಒಂದು ಕೃತಿಯೊಂದಿಗೆ ತಮ್ಮ ಸ್ವವಿವರವನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಕೇಂದ್ರ ಕಚೇರಿಗೆ ತಲುಪುವಂತೆ **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ. ಎಚ್.ವಿಶ್ವನಾಥ್ ಮತ್ತು ಇಂದಿರಾ ದತ್ತಿ ಪ್ರಶಸ್ತಿಯು ರಾಜ್ಯ ಮಟ್ಟದ ಪ್ರಶಸ್ತಿಯಾಗಿದ್ದು ಪ್ರತಿ ವರ್ಷ ಕನ್ನಡ ಸಾಹಿತ್ಯ ಪರಿಷತ್ತು ವಿಶೇಷ ದೃಷ್ಟಿಚೇತನ ಲೇಖಕರಿಂದ ರಚಿಸಲ್ಪಟ್ಟ ಯಾವುದೇ ಪ್ರಕಾರದ ಸಾಹಿತ್ಯ ಕೃತಿಯನ್ನು ಈ ಪ್ರಶಸ್ತಿಗಾಗಿ ಪರಿಗಣಿಸಲಾಗುವುದು. ಪ್ರಶಸ್ತಿಯು ೧೦ ಸಾವಿರ ರೂ. ನಗದು ಹಾಗೂ ಸ್ಮರಣಿಕೆ ಹೊಂದಿದ್ದು, ಅರ್ಹ ವಿಶೇಷ ದೃಷ್ಟಿ ಚೇತನ ಲೇಖಕರು, **ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು, ಪಂಪಮಹಾಕವಿ ರಸ್ತೆ, ಚಾಮರಾಜ ಪೇಟೆ, ಬೆಂಗಳೂರು-೫೬೦೦೧೮** ಈ ವಿಳಾಸಕ್ಕೆ ಕಳಿಸಲು ಪ್ರಕಟಣೆಯಲ್ಲಿ ಕೋರಲಾಗಿದೆ.

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು